# All India Radio: Bangalore
# Regional Bulletin In Kannada
# 02.01.2025 / 6.40 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 02.01.2025 / 6.40 p.m.

**<><><><>**

ಮುಖ್ಯಾಂಶಗಳು

1. ವೈಜ್ಞಾನಿಕ ಚಿಂತಕ ಡಾ.ಎಚ್.ನರಸಿಂಹಯ್ಯ ಹೆಸರಿನಲ್ಲಿ ಅಭಿವೃದ್ಧಿ ಪ್ರಾಧಿಕಾರ ಸ್ಥಾಪನೆ; ಎರಡೂವರೆ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಹೊಸ ಪಬ್ಲಿಕ್ ಶಾಲೆಗಳ ಪ್ರಾರಂಭ - ಸಚಿವ ಡಾ.ಎಂ.ಸಿ.ಸುಧಾಕರ್ ಘೋಷಣೆ
2. ಕೇಂದ್ರ ಬಜೆಟ್ ಎಲ್ಲಾ ವರ್ಗದ ಜನರ ಆರ್ಥಿಕ ಸಬಲೀಕರಣಕ್ಕೆ ಸಹಕಾರಿ - ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ
3. ಭಾರತದ ಸಿನಿಮಾಗಳು ಹಾಲಿವುಡ್ ಉದ್ಯಮಕ್ಕೆ ಪೈಪೋಟಿ ನೀಡುವ ಮಟ್ಟಕ್ಕೆ ಬೆಳೆದಿದೆ - ಕೇಂದ್ರ ಸಚಿವ ಡಾ.ಎಲ್.ಮುರುಗನ್
4. ಉಡುಪಿಯಲ್ಲಿಂದು ಮತ್ತೋರ್ವ ನಕ್ಸಲ್ ಸದಸ್ಯೆ ಉಡುಪಿಯಲ್ಲಿಂದು ಶರಣಾಗತಿ

<><><><>

ವೈಚಾರಿಕ ಮತ್ತು ವೈಜ್ಞಾನಿಕ ಚಿಂತನೆಗಳಿಗೆ ಸಾಕಾರ ಮೂರ್ತಿಯಂತಿದ್ದ ಶಿಕ್ಷಣ ತಜ್ಞ ಪದ್ಮಭೂಷಣ ದಿವಂಗತ ಡಾ.ಹೆಚ್.ನರಸಿಂಹಯ್ಯ ಅವರ ಹೆಸರಿನಲ್ಲಿ ಅಭಿವೃದ್ಧಿ ಪ್ರಾಧಿಕಾರ ಸ್ಥಾಪಿಸಲು ಸರ್ಕಾರ ಮುಂದಾಗಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಹೇಳಿದ್ದಾರೆ. ಡಾ.ಹೆಚ್.ಎನ್ ಅವರ ಹುಟ್ಟೂರು ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು ತಾಲ್ಲೂಕಿನ ಹೊಸೂರು ಗ್ರಾಮದಲ್ಲಿ ಇಂದು ಆಯೋಜಿಸಲಾಗಿದ್ದ ಡಾ.ಹೆಚ್.ಎನ್ ಅವರ ಜನ್ಮ ಶತಾಬ್ದಿ ಹಾಗೂ ಅವರು ಓದಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶತಮಾನೋತ್ಸವ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಪ್ರಾಧಿಕಾರ ಸ್ಥಾಪನೆಯ ರೂಪುರೇಷೆಗಳ ಕರಡು ತಯಾರಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ. ರಾಜ್ಯದಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಗಳ ಬಗ್ಗೆ ಜನತೆಗೆ ಹೆಚ್ಚು ಒಲವಿದೆ. ಕನ್ನಡ ಮತ್ತು ಇಂಗ್ಲಿಷ್ ದ್ವಿಭಾಷಾ ಪದ್ಧತಿಯಲ್ಲಿ ಒಂದು ಆವರಣದಲ್ಲಿ ಎಲ್ ಕೆಜಿಯಿಂದ ಪದವಿ ಪೂರ್ವ ಹಂತದ ವರೆಗೂ ಶಿಕ್ಷಣ ನೀಡುವ ಈ ಶಾಲೆಗಳ ಸಂಖ್ಯೆಯನ್ನು ಮತ್ತಷ್ಟು ಹೆಚ್ಚಿಸಲು ಸರ್ಕಾರ ಬದ್ಧವಾಗಿದೆ. ಈಗಾಗಲೇ ಏಷ್ಯನ್ ಅಭಿವೃದ್ಧಿ ಬ್ಯಾಂಕ್ ನಿಂದ ೨ ಸಾವಿರ ಕೋಟಿ ರೂಪಾಯಿ ಸಾಲ ಪಡೆಯಲು ಸಚಿವ ಸಂಪುಟ ಅನುಮೋದನೆ

ನೀಡಿದ್ದು, ಸರ್ಕಾರವೂ ಐದು ನೂರು ಕೋಟಿಗಳನ್ನು ವೆಚ್ಚ ಮಾಡಲು ನಿರ್ಧರಿಸಿದೆ. ಒಟ್ಟು ೨೫೦೦ ಕೋಟಿ ರೂಪಾಯಿ ಅನುದಾನದಲ್ಲಿ ರಾಜ್ಯದಲ್ಲಿ ಹೊಸ ಪಬ್ಲಿಕ್ ಶಾಲೆಗಳನ್ನು ಆರಂಭಿಸಲಾಗುವುದು ಎಂದರು. ಸಂಸದ ಡಾ.ಕೆ.ಸುಧಾಕರ್, ಸಾಹಿತಿ ನಾಡೋಜ ಹಂಪ ನಾಗರಾಜಯ್ಯ, ಮಾಜಿ ಸಚಿವ ಎನ್.ಹೆಚ್. ಶಿವಶಂಕರರೆಡ್ಡಿ ಹಾಗೂ ಶಾಸಕ ಕೆ.ಹೆಚ್.ಪುಟ್ಟಸ್ವಾಮಿಗೌಡ ಮತ್ತಿತರರು ಹಾಜರಿದ್ದರು.

<><><><>

ಕೇಂದ್ರ ಬಜೆಟ್ ಪ್ರಧಾನಿ ನರೇಂದ್ರ ಮೋದಿ ಅವರ ಕನಸಾಗಿರುವ ವಿಕಸಿತ ಭಾರತ ಮತ್ತು ಆತ್ಮ ನಿರ್ಭರ ಭಾರತ ಕಲ್ಪನೆಗೆ ಪೂರಕವಾಗಿದ್ದು ಎಲ್ಲಾ ವರ್ಗದ ಜನರ ಆರ್ಥಿಕ ಸಬಲೀಕರಣಕ್ಕೆ ಸಹಕಾರಿಯಾಗಲಿದೆ ಎಂದು ಕೇಂದ್ರ ಉಕ್ಕು ಮತ್ತು ಭಾರಿ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ. ಹಾಸನ ಜಿಲ್ಲೆಯ ಚನ್ನರಾಯಪಟ್ಟಣದಲ್ಲಿ ಮಾತನಾಡಿದ ಅವರು, ದೂರ ದೃಷ್ಟಿ ಇಟ್ಟುಕೊಂಡು ಬಡತನ, ನಿರುದ್ಯೋಗ ಸಮಸ್ಯೆ, ರೈತರ ಸಮಸ್ಯೆ ನಿವಾರಣೆ, ಮಹಿಳೆಯರ ಸ್ವಾವಲಂಬಿ ಬದುಕಿಗೆ ಬಜೆಟ್‌ನಲ್ಲಿ ಪ್ರಮುಖ ಆದ್ಯತೆ ನೀಡಲಾಗಿದೆ ಎಂದರು. ಹಾಸನ ವಿಮಾನ ನಿಲ್ದಾಣದ ಬಗ್ಗೆ ಸಂಬಂಧಪಟ್ಟ ಕೇಂದ್ರ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ಕೇಂದ್ರ, ಸರ್ಕಾರ ಪೂರಕ ಸಹಕಾರ ನೀಡಿದ್ದು ಇದಕ್ಕೆ ರಾಜ್ಯ ಸರ್ಕಾರ ಸ್ಪಂದಿಸುವ ಅಗತ್ಯವಿದೆ ಎಂದರು. ರಾಜಕೀಯ ಹಗೆತನದಿಂದ ಕರ್ನಾಟಕದ ಪ್ರತಿಷ್ಠಿತ ಕೈಗಾರಿಕೆ, ಅಸಂಖ್ಯಾತರಿಗೆ ಉದ್ಯೋಗ ಕಲ್ಪಿಸಿದ್ದ ಕುದುರೆಮುಖ ಕಬ್ಬಿಣ ಅದಿರು ಸಂಸ್ಥೆ ಮಂಗಳೂರು ಕಾರ್ಖಾನೆಯನ್ನು ಮುಚ್ಚಿಸಲು ರಾಜ್ಯ ಕಾಂಗ್ರೆಸ್ ಸರ್ಕಾರ ಷಡ್ಯಂತ್ರ ನಡೆಸಿದೆ ಎಂದು ಅವರು ಆಪಾದಿಸಿದರು. ಕೇಂದ್ರ ಮಂತ್ರಿಯಾಗಿ ಎರಡೂ ಇಲಾಖೆಗಳ ಎಲ್ಲಾ ಕಾರ್ಖಾನೆ, ಕಂಪನಿಗಳಿಗೆ ಭೇಟಿ ನೀಡಿದ್ದು, ತಮ್ಮ ಮನವಿಗಳನ್ನು ಪ್ರಧಾನಿ ಅವರು ದೊಡ್ಡ ಮನಸ್ಸಿನಿಂದ ಪುರಸ್ಕರಿದ್ದಾರೆ. ಆದರೆ, ಕರ್ನಾಟಕಕ್ಕೆ ಇಂತಹದ್ದು ಬೇಕು ಎಂದು ರಾಜ್ಯದಿಂದ ಯಾರೊಬ್ಬರೂ ತಮ್ಮ ಮುಂದೆ ಬಂದು ಚರ್ಚೆ ಮಾಡಿಲ್ಲ ಎಂದು ಸಚಿವ ಕುಮಾರಸ್ವಾಮಿ ದೂರಿದರು.

<><><><>

ಭಾರತದ ಸಿನಿಮಾಗಳು ಅಂತಾರಾಷ್ಟ್ರೀಯ ಮಟ್ಟದಲ್ಲಿ ಹೆಸರುಗಳಿಸುತ್ತಿದ್ದು, ಹಾಗೂ ಹಾಲಿವುಡ್ ಸಿನಿಮಾಗಳು ಪೈಪೋಟಿ ನೀಡುವ ಮಟ್ಟಕ್ಕೆ ಬೆಳೆದು ನಿಂತಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ ಎಲ್ ಮುರುಗನ್ ತಿಳಿಸಿದ್ದಾರೆ. ಇಂದು ಮೈಸೂರು ಮುಕ್ತ ವಿಶ್ವವಿದ್ಯಾಲಯ ಸಭಾಂಗಣದಲ್ಲಿ ನಡೆದ ಪರಿದೃಶ್ಯ ಇಂಟರ್ ನ್ಯಾಷನಲ್ ಕಿರು ಚಿತ್ರ ಹಾಗೂ ಸಾಕ್ಷ್ಯಚಿತ್ರ ಹಬ್ಬದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಪ್ರಾದೇಶಿಕ ಸಿನಿಮಾಗಳು ಇಂದು ಹಾಲಿವುಡ್ ಸಿನಿಮಾಗಳಿಗೂ ಪೈಪೋಟಿ ನೀಡುತ್ತಿವೆ. ಪುಷ್ಪ, ಆರ್‌ಆರ್‌ಆರ್ ಹಾಗೂ ಇನ್ನಿತರ

ಅತ್ಯುತ್ತಮ ಸಿನಿಮಾಗಳು ಹೊರಬರುತ್ತಿವೆ. ಹೀಗೆ ಪ್ರಾದೇಶಿಕ ಸಿನಿಮಾಗಳು ದೊಡ್ಡ ಮಟ್ಟದಲ್ಲಿ ಬೆಳೆಯಬೇಕು. ಇತ್ತೀಚಿಗೆ ಸಿನಿಮಾ ವೀಕ್ಷಿಸುವವರ ಸಂಖ್ಯೆಯು ಹೆಚ್ಚಾಗುತ್ತಿದೆ. ಈ ಹಿಂದೆ ಸಿನಿಮಾ ಶೂಟಿಂಗ್ ಮಾಡಲು ಅನುಮತಿಗಾಗಿ ಎಲ್ಲ ಕಡೆಗಳಿಗೂ ತೆರಳಬೇಕಿತ್ತು ಆದರೆ ಇಂದು ಒಂದು ಇಮೇಲ್ ಮಾಡಿದರೆ ಸಾಕು ಅನುಮತಿ ದೊರೆಯುವಂತ ವಾತವರಣ ದೊರೆತಿದೆ. ಅನಿಮೇಷನ್ ಉದ್ಯಮವು ಉತ್ತಮವಾಗಿ ಬೆಳೆಯುತ್ತಿದೆ. ಭಾರತದ ಆರ್ಥಿಕತೆ ಕ್ರಿಯೇಟಿವ್ ಎಕಾನಮಿ ಆಗಿದೆ. ಕಳೆದ ವರ್ಷ ಮುಂಬೈ ನಲ್ಲಿ ನಡೆದ ಫಿಲ್ಮ್ ಫೆಸ್ಟಿವಲ್ ನಲ್ಲಿ ೭೫ ಯುವಕರು ಫಿಲ್ಮ್ ಮೇಕರ್ ಆಗಿ ಹೊರ ಬಂದಿದ್ದಾರೆ. ಈ ವರ್ಷ ೧೦೦ ಕ್ಕೂ ಹೆಚ್ಚು ಮಂದಿ ಯುವಕರು ಹೊರಬರುತ್ತಿದ್ದಾರೆ ಎಂದರು. ಮೈಸೂರು ಸಿನಿಮಾ ಸೊಸೈಟಿ ರಾಷ್ಟ್ರ ಮಟ್ಟದ ಶಾರ್ಟ್ ಫಿಲ್ಮ್, ಸಾಕ್ಷ್ಯ ಚಿತ್ರ ಸಮ್ಮೇಳನದ ಮೂಲಕ ಪ್ರೋತ್ಸಾಹ ನೀಡುತ್ತಿದೆ, ಇದು ಒಳ್ಳೆಯ ಕಾರ್ಯ ಎಂದು ಶ್ಲಾಘಿಸಿದರು. ಇದೆ ವೇಳೆ ಉದ್ಯಮಿ ಜಗನ್ನಾಥ್ ಶೆಣೈ, ನಟ ಸುನೀಲ್ ಪುರಾಣಿಕ್, ಮೈಸೂರ್ ಫಿಲ್ಮ್ ಸೊಸೈಟಿ ಅಧ್ಯಕ್ಷ ಡಾ ಚಂದ್ರಶೇಖರ ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.

<><><>

ನಕ್ಸಲ್ ಚಟುವಟಿಕೆಯಲ್ಲಿ ಭಾಗಿಯಾಗಿದ್ದ ತೊಂಬಟ್ಟು ಲಕ್ಷ್ಮೀ ಅಂತಿಮವಾಗಿ ಇಂದು ಉಡುಪಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಶರಣಾಗತರಾಗಿದ್ದಾರೆ. ಉಡುಪಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಗೆ ಲಕ್ಷ್ಮೀ ತೊಂಬಟ್ಟು ಆಗಮಿಸಿ ಕಾನೂನು ಪ್ರಕ್ರಿಯೆ ಪೂರ್ಣಗೊಳಿಸಿದ ಬಳಿಕ ಭದ್ರತೆಯೊಂದಿಗೆ ಡಿಸಿ ಕಚೇರಿಗೆ ಲಕ್ಷ್ಮಿಯನ್ನು ಪೊಲೀಸರು ಕರೆದೊಯ್ದರು. ಅಂತಿಮವಾಗಿ ಡಿಸಿ ಕಚೇರಿಯಲ್ಲಿ ಶರಣಾಗತಿ ಪಕ್ರಿಯೆ ಪೂರ್ಣಗೊಳಿಸಲಾಯಿತು. ಈ ಸಂದರ್ಭದಲ್ಲಿ ನಕ್ಸಲ್ ಶರಣಾಗತಿ ಹಾಗೂ ಪುನರ್ ವಸತಿ ಸಮಿತಿಯ ಸದಸ್ಯ ಶ್ರೀ ಪಾಲ್ ಮಾತನಾಡಿದ್ದಾರೆ.

**ಧ್ವನಿ: ಸದಸ್ಯ ಶ್ರೀಪಾಲ್**

<><><>

ಗದಗ ನಗರದ ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಶಿವಯೋಗಿ ಶ್ರೀ ಸಿದ್ದರಾಮೇಶ್ವರರ ೮೫೨ ನೇ ಜಯಂತ್ಯೋತ್ಸವ ಕಾರ್ಯಕ್ರಮ ಇಂದು ಜರುಗಿತು. ಗದಗ ಜಿಲ್ಲಾ ಉಸ್ತುವಾರಿ ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮ ಉದ್ಘಾಟಿಸಿ, ಶಿವಯೋಗಿ ಶ್ರೀ ಸಿದ್ಧರಾಮೇಶ್ವರರ ಆದರ್ಶಗಳು ಸರ್ವಕಾಲಕ್ಕೂ ಪ್ರಸ್ತುತ ಎಂದರು. ರೋಣ ಶಾಸಕ ಜಿ.ಎಸ್.ಪಾಟೀಲ, ಮಾಜಿ ಶಾಸಕ ಡಿ ಆರ್ ಪಾಟೀಲ ಸೇರಿದಂತೆ ಹಲವಾರು ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಭಾರತೀಯ ವೈದ್ಯಕೀಯ ಸಂಘದ ಸಹಯೋಗದಲ್ಲಿ ಇಂದು ಉಚಿತ ಕ್ಯಾನ್ಸರ್ ತಪಾಸಣೆ ಶಿಬಿರ ಹಾಗೂ ಕ್ಯಾನ್ಸರ್ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಕಿದ್ವಾಯಿ ಸ್ಮಾರಕ ಗ್ರಂಥಿ ಸಂಸ್ಥೆಯ ಪ್ರಾಧ್ಯಾಪಕ

ಡಾ.ಕೆ.ಎನ್.ಲೋಕೇಶ್ ಮಾತನಾಡಿ, ಆರಂಭದಲ್ಲಿಯೇ ತಪಾಸಣೆ ಮಾಡಿಸಿಕೊಂಡರೆ ಕ್ಯಾನ್ಸರ್ ಗುಣಪಡಿಸಲು ಸಾಧ್ಯವಿದ್ದು, ಈ ಬಗ್ಗೆ ಜನರಲ್ಲಿ ಜಾಗೃತಿ ಮೂಡಬೇಕಿದೆ. ಬದಲಾಗುತ್ತಿರುವ ಜೀವನ ಶೈಲಿಯಿಂದ ಉಂಟಾಗುವ ಹಾರ್ಮೋನ್‌ಗಳ ವ್ಯತ್ಯಾಸವೂ ಕ್ಯಾನ್ಸರ್‌ಗೆ ಕಾರಣವಾಗಬಹುದು. ಇತ್ತೀಚೆಗೆ ಸ್ತನ ಕ್ಯಾನ್ಸರ್‌ಗಳು ಹೆಚ್ಚಾಗುತ್ತಿದ್ದು, ೪೦ ವರ್ಷ ದಾಟಿದ ಸ್ತ್ರೀಯರು ತಪಾಸಣೆ ಮಾಡಿಸಿಕೊಂಡರೆ ಕ್ಯಾನ್ಸರ್ ಬರದಂತೆ ತಡೆಯಬಹುದಾಗಿದೆ ಎಂದು ತಿಳಿಸಿದರು.

<><><><>

ರಾಯಚೂರು ನಗರದ ಅಭಿವೃದ್ಧಿ ಕುರಿತಂತೆ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ, ಸಮಗ್ರ ಯೋಜನೆ ರೂಪಿಸಲಾಗುವುದು ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೋಹೊಪತ್ರ ಹೇಳಿದರು. ಇಲ್ಲಿ ಮುಖ್ಯವಾಗಿ ಪ್ಲಾಸ್ಟಿಕ್ ಬಳಕೆ ಹೆಚ್ಚಾಗಿರುವುದು ಕಂಡುಬಂದಿದೆ. ಜೊತೆಗೆ ನಗರದಲ್ಲಿ ಧೂಳು ಹೆಚ್ಚಾಗಿದ್ದು, ಪ್ಲಾಸ್ಟಿಕ್ ಹಾಗೂ ಧೂಳು ಮುಕ್ತ ನಗರವನ್ನಾಗಿಸಲು ಮುಂದಿನ ದಿನಗಳಲ್ಲಿ ಯೋಜನೆಯನ್ನು ರೂಪಿಸಿ ಕಾರ್ಯ ಕೈಗೆತ್ತಿಕೊಳ್ಳಲಾಗುವುದು ಎಂದರು.

<><><><>

ಆಕಾಶವಾಣಿ, ಕೇಂದ್ರ ಸಂಸ್ಕೃತಿ ಸಚಿವಾಲಯದ ಸಹಯೋಗದಿಂದ 'ಹರ್ ಕಂಠ್ ಮೆ ಭಾರತ್' ಶೀರ್ಷಿಕೆಯ ವಿಶೇಷ ಶಾಸ್ತ್ರೀಯ ಸಂಗೀತ ಕಾರ್ಯಕ್ರಮವನ್ನು ಇಂದು ಆರಂಭಿಸಿದೆ. ಈ ಕಾರ್ಯಕ್ರಮ ಈ ತಿಂಗಳ ೧೮ ರವರೆಗೆ ಬೆಳಿಗ್ಗೆ ೯.೩೦ ರಿಂದ ೧೦.೩೦ ರವರೆಗೆ ೨೧ ಆಕಾಶವಾಣಿ ಕೇಂದ್ರಗಳಿಂದ ನೇರವಾಗಿ ಪ್ರಸಾರಗೊಳ್ಳಲಿದೆ. ಕೇಂದ್ರ ಸಂಸ್ಕೃತಿ ಖಾತೆ ಕಾರ್ಯದರ್ಶಿ ಅರುಣೀಶ್ ಚಾವಲಾ ಮತ್ತು ಪ್ರಸಾರ ಭಾರತಿ ಸಿಇಒ ಗೌರವ್ ದ್ವಿವೇದಿ ಕಾರ್ಯಕ್ರಮ ಉದ್ಘಾಟಿಸಿದರು. ಆಕಾಶವಾಣಿ ಮಹಾನಿರ್ದೇಶಕಿ ಡಾ.ಪ್ರಾದ್ಯ ಪಾಲಿ ಗೌಲ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><><><>

ಸಂಕ್ಷಿಪ್ತ ಸುದ್ದಿಗಳು-೧

1. ಪ್ರತಿಯೊಬ್ಬ ನಾಗರಿಕರಿಗೂ ಶಕ್ತಿ ತುಂಬುವ ಗ್ರಂಥ ಸಂವಿಧಾನವಾಗಿದೆ. ಹೊಸ ಪೀಳಿಗೆ ಸಂವಿಧಾನದ ಬಗ್ಗೆ ಪ್ರಜ್ಞೆ ಹೆಚ್ಚಿಸಿಕೊಳ್ಳಬೇಕೆಂದು ಕೃಷಿ ಮತ್ತು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದ್ದಾರೆ.
2. ಇತ್ತೀಚೆಗೆ ಮೈಕ್ರೋಫೈನಾನ್ಸ್, ಲೇವಾದೇವಿ, ಗಿರವಿ ಹಣಕಾಸು ಸಂಸ್ಥೆಗಳಿಂದ ತನ್ನ ಸಾಲಗಾರರಿಗೆ ಅತಿಯಾಗಿ ಬಡ್ಡಿ ವಿಧಿಸುತ್ತಿರುವುದು ಹಾಗೂ ಸಾಲ ವಸೂಲಾತಿ ಸಮಯದಲ್ಲಿ ಸಾಲಗಾರರಿಗೆ ಕಿರುಕುಳ ನೀಡುತ್ತಿರುವುದು ಕಂಡುಬಂದಿರುವುದರಿಂದ, ಈ

ಬಗ್ಗೆ ಕ್ರಮ ಕೈಗೊಳ್ಳಲು ಇದೇ ೪ ರಂದು ಚಿತ್ರದುರ್ಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧ್ಯಕ್ಷತೆಯಲ್ಲಿ ಮೈಕ್ರೋಫೈನಾನ್ಸ್ ಸಂಸ್ಥೆಗಳ ಸಭೆ ನಿಗದಿಪಡಿಸಲಾಗಿದೆ.

3. ಉಡುಪಿ ನಗರಸಭಾ ವ್ಯಾಪ್ತಿಯಲ್ಲಿ ಅಳವಡಿಸಲಾಗಿರುವ ಖಾಯಂ ಜಾಹೀರಾತು ಫಲಕಗಳಲ್ಲಿ ನಗರಸಭೆಯಿಂದ ನೀಡಲಾಗುವ ಅನುಮತಿ ಸಂಖ್ಯೆ ಮತ್ತು ದಿನಾಂಕವನ್ನು ಕಡ್ಡಾಯವಾಗಿ ದಾಖಲಿಸಲು ಇದೇ ಶುಕ್ರವಾರದವರೆಗೆ ಗಡುವು ನೀಡಲಾಗಿದೆ.

4. ಚಿಕ್ಕಬಳ್ಳಾಪುರ ತಾಲ್ಲೂಕಿನ ಸುಪ್ರಸಿದ್ಧ ಚಿತ್ರಾವತಿ ಶ್ರೀ ಸುಬ್ರಮಣ್ಯೇಶ್ವರ ಜಾತ್ರೆ ಮತ್ತು ಬ್ರಹ್ಮ ರಥೋತ್ಸವವು ನಾಳೆ ನೆರವೇರಲಿದ್ದು, ನೆರೆಯ ಆಂಧ್ರ, ತೆಲಂಗಾಣಗಳಿಂದಲೂ ಸಾವಿರಾರು ಶ್ರದ್ಧಾಳುಗಳು ಪಾಲ್ಗೊಳ್ಳುವ ನಿರೀಕ್ಷೆ ಇದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>